# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀಮತಿ ಪಾರ್ವತಮ್ಮ ಕೋಂ ವೆಂಕಟರಮಣಪ್ಪ ಹಿಂದಿನ ಅಧ್ಯಕ್ಷರು, ಮಿಟ್ಟಹಳ್ಳಿ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಕ.ಪಂ.ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4), 48(5) ರನ್ವಯ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಸಮ ಸಂಖ್ಯೆಯ ಆದೇಶ ಸಂಖ್ಯೆ:ಗ್ರಾಅಪ 1003 ಗ್ರಾಪಂಅ 2019, ದಿನಾಂಕ:06.01.2020.
2. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:2502/2020ರ ಆದೇಶ, ದಿನಾಂಕ:13.03.2020.
3. ಶ್ರೀಮತಿ ಪಾರ್ವತಮ್ಮ ಕೋಂ ವೆಂಕಟರಮಣಪ್ಪ ಅಧ್ಯಕ್ಷರು, ಮಿಟ್ಟಹಳ್ಳಿ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ರವರಿಗೆ ಜಾರಿ ಮಾಡಿದ ಕಾರಣ ಕೇಳುವ ನೋಟೀಸ್ ದಿನಾಂಕ:05.06.2020.
4. ಸದರಿ ಆಪಾದಿತರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ:22.06.2020.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರದ ಆದೇಶದಲ್ಲಿ ಶ್ರೀಮತಿ ಪಾರ್ವತಮ್ಮ ಕೋಂ ವೆಂಕಟರವಣಪ್ಪ ರವರು ಮಿಟ್ಟಹಳ್ಳಿ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ರವರು 2016-17 ನೇ ಸಾಲಿನ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿಯಲ್ಲಿ ಒಂದೇ ಭಾವಚಿತ್ರಕ್ಕೆ ಸಂಬಂಧಪಟ್ಟಂತೆ ಸುಮಾರು ಶೌಚಾಲಯದ ಹಲವಾರು ಫಲಾನುಭವಿಗಳಿಗೆ ಸೇರಬೇಕಾದ ಅನುದಾನವನ್ನು ಬ್ಯಾಂಕ್ ಖಾತೆಗಳಿಗೆ ಬಿಡುಗಡೆ ಮಾಡಿಕೊಂಡು ಸರ್ಕಾರಿ ಹಣವನ್ನು ದುರುಪಯೋಗಪಡಿಸಿಕೊಂಡಿರುವುದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ ಹಾಗೂ ಪ್ರಾದೇಶಿಕ ಆಯುಕ್ತರು, ಬೆಂಗಳೂರು ಇವರ ವಿಚಾರಣಾ ವರದಿಯಿಂದ ಸಾಬೀತಾಗಿರುವುದರಿಂದ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4) & 48(5) ರನ್ವಯ ಮಿಟ್ಟಹಳ್ಳಿ ಗ್ರಾಮ ಪಂಚಾಯಿತಿಯ ಸದಸ್ಯತ್ವ ಸ್ಥಾನ ಹಾಗೂ ಅಧ್ಯಕ್ಷ ಸ್ಥಾನದಿಂದ ತೆಗೆದುಹಾಕಿ ಆದೇಶಿಸಲಾಗಿತ್ತು.

ಸದರಿ ಎದುರುದಾರರು ಉಲ್ಲೇಖ (1)ರಲ್ಲಿನ ಸರ್ಕಾರದ ಆದೇಶವನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ **ರಿಟ್ ಅರ್ಜಿ ಸಂಖ್ಯೆ:2502/2020 (LB-RES)** ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ಉಲ್ಲೇಖ (2) ರಲ್ಲಿ ಹೊರಡಿಸಿದ ತೀರ್ಪಿನಂತೆ ಆಪಾದಿತ ಹಿಂದಿನ ಅಧ್ಯಕ್ಷರಿಗೆ ಪ್ರಾದೇಶಿಕ ಆಯುಕ್ತರು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿಯ ಪ್ರತಿಯನ್ನು ಲಗತ್ತಿಸಿ ಮೇಲೆ ಓದಲಾದ ಕ್ರಮ ಸಂಖ್ಯೆ(3) ರಲ್ಲಿ ಸದರಿಯವರ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ಮತ್ತು 48(4) ರಡಿ ಕ್ರಮವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಸದರಿಯವರು ಕಾರಣ ಕೇಳುವ ನೋಟೀಸಿಗೆ ಈ ಕೆಳಕಂಡಂತೆ ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ.

- ಶ್ರೀ ವಿ ವೆಂಕಟಾದ್ರಿ ಬಿನ್ ವೆಂಕಟರವಣಪ್ಪ, ಗ್ರಾಮ ಪಂಚಾಯತಿ ಸದಸ್ಯರು ವೆಂಕಟರೆಡ್ಡಿಪಾಳ್ಯ, ಮಿಟ್ಟಹಳ್ಳಿ ಗ್ರಾಮ ಪಂಚಾಯತಿರವರ ಮನವಿ ಅರ್ಜಿ ದಿನಾಂಕ:16.04.2018 ಮತ್ತು ಇದೇ ಗ್ರಾಮ ಪಂಚಾಯತಿಯ ಶಿವಣ್ಣ ಬಿನ್ ಅಂಜಪ್ಪರಾಸಪಲ್ಲಿ ಗ್ರಾಮರವರು ಸ್ವಚ್ಛ ಭಾರತ್ ಮಿಷನ್ (ವೈಯಕ್ತಿಕ ಶೌಚಾಲಯಗಳ ನಿರ್ಮಾಣ) ಯೋಜನೆಯಲ್ಲಿ ಹಣದುರುಪಯೋಗ ಪಡಿಸಿಕೊಂಡಿರುತ್ತೇನೆಂದು ತಮ್ಮ ಇಲಾಖೆ ಹಾಗೂ ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರಲ್ಲಿ ಸಂಖ್ಯೆ:ದೂರು/ಲೋಕ್/ಬಿಡಿ/3234/2017 ಎಆರ್ಇ-6 ರವರಲ್ಲಿ ದೂರು ದಾಖಲಿಸಿದರು.
- ಸದರಿ ಪ್ರಕರಣದಲ್ಲಿ ವಿಚಾರಣೆ ನಡೆಸಿ ದಿ:07/11/2019 ರಂದು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗರವರು ವರದಿಯನ್ನು ಸಲ್ಲಿಸಿ ಅಧ್ಯಕ್ಷ ಮತ್ತು ಸದಸ್ಯತ್ವ ಪದವಿಯಿಂದತೆಗೆದು ಹಾಕಿ ಅಂತಿಮ ಆದೇಶವನ್ನು ತಮ್ಮ ಕಛೇರಿಯಿಂದ

**ಆದೇಶದ ಸಂಖ್ಯೆ:ಗ್ರಾಅಪ/1003ಗ್ರಾಪಂಅ/2019/ದಿ:06/01/2020** ರಂದು ತಮಗೆ ಜಾರಿಗೊಳಿಸಿರುತ್ತಾರೆ. ತಮ್ಮನ್ನು ಅನರ್ಹಗೊಳಿಸಿರುವ ಆದೇಶದ ವಿರುದ್ಧ ಬೆಂಗಳೂರು ಮಾನ್ಯಉಚ್ಚನ್ಯಾಯಾಲಯದಲ್ಲಿ **ರಿಟ್ ಅರ್ಜಿ ಸಂಖ್ಯೆ: 2502/2020(LB-RES)** ಪ್ರಕರಣವನ್ನು ದಾಖಲಿಸಿ ತಡೆಯಾಜ್ಞೆ ಪಡೆದು ತಮ್ಮ ಕಚೇರಿ ಹಾಗೂ ತಮ್ಮ ಅಧೀನ ಕಛೇರಿಗಳಿಗೆ ನ್ಯಾಯಾಲಯದ ಆದೇಶವನ್ನು ಸಲ್ಲಿಸಿರುತ್ತೇನೆ. ಮಾನ್ಯ ಉಚ್ಚನ್ಯಾಯಾಲಯ ಮೇಲ್ಕಂಡ ತಮ್ಮ ಪ್ರಕರಣದಲ್ಲಿ ದಿ:13/03/2020 ರಂದು ಅಂತಿಮ ಆದೇಶ ಹೊರಡಿಸಿದ್ದು, ತನ್ನ ಪರವಾಗಿ ಆದೇಶವನ್ನು ತನ್ನ ಮೇಲ್ಮನವಿಯನ್ನು ಪುರಸ್ಕರಿಸಿ ಆದೇಶಿಸಿದೆ. ಸದರಿ ಆದೇಶದ ಪ್ರತಿಯನ್ನು ಮತ್ತು ಹಿಂದಿನ ಸರ್ಕಾರಿ ಆದೇಶದ ಪ್ರತಿಯನ್ನು ತಮ್ಮ ಸೂಕ್ತ ಪರಿಶೀಲನೆಗೆ ಅಡವಿಟ್ಟು ಸಲ್ಲಿಸಿರುತ್ತೇನೆಂದು ತಿಳಿಸಿರುತ್ತಾರೆ.

➢ ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರು ಮೇಲೆ ನಮೂದಿಸಿರುವ ಪ್ರಕರಣದಲ್ಲಿ ವಿಚಾರಣೆ ನಡೆಸಿ ದಿ:18/03/2020 ರಂದು ಕಾರ್ಯನಿರ್ವಾಹಕ ಅಧಿಕಾರಿಗಳ ವರದಿಯ ಮೇರೆಗೆ ಮತ್ತು ಮಾನ್ಯ ಉಚ್ಚ ನ್ಯಾಯಾಲಯ ಹೊರಡಿಸಿರುವ ಆದೇಶದ ಮೇರೆಗೆ ದೂರು ಅರ್ಜಿಯನ್ನು ವಜಾಗೊಳಿಸಿ ಪ್ರಕರಣವನ್ನು ಮುಕ್ತಾಯಗೊಳಿಸಿರುತ್ತಾರೆ. ಈ ದಾಖಲೆಗಳನ್ನು ಪ್ರತಿಗಳನ್ನು ತಮ್ಮ ಸೂಕ್ತ ಪರಿಶೀಲನೆಗೆ ಅಡವಿಟ್ಟು ಸಲ್ಲಿಸಿರುತ್ತೇನೆಂದು ತಿಳಿಸುತ್ತಾ ಸರ್ಕಾರವು ತಮಗೆ ಜಾರಿಗೊಳಿಸಿರುವ 2ನೇ ಕಾರಣ ಕೇಳಿ ನೀಡಿರುವ ನೋಟೀಸ್‌ನ್ನು ಹಿಂಪಡೆಯಲು ಹಾಗೂ ಪ್ರಕರಣವನ್ನು ಮುಕ್ತಾಯಗೊಳಿಸಲು ತಮ್ಮ ಪ್ರಾಧಿಕಾರದಲ್ಲಿ ಮನವಿ ಮಾಡಿರುತ್ತೇನೆಂದು ಹಾಗೂ ತಾವು ಯಥಾಸ್ಥಿತಿಯಲ್ಲಿ ಅಧ್ಯಕ್ಷ ಮತ್ತು ಸದಸ್ಯರ ಹುದ್ದೆಯಲ್ಲಿ ನಿಗಧಿತ ಕಾಲವಧಿಯವರೆಗೆ ಮುಂದುವರೆಸಲು ತಮ್ಮ ಅಧೀನ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕಾಗಿ ತಮ್ಮಲ್ಲಿ ಮನವಿ ಮಾಡಿರುತ್ತೇನೆಂದು ತಿಳಿಸಿದ್ದಾರೆ.

ಈ ಪ್ರಕರಣದಲ್ಲಿ ದೂರುದಾರರ ದೂರಿನಲ್ಲಿನ ಅಂಶಗಳು, ಆಪಾದಿತ ಅಧ್ಯಕ್ಷರ ಲಿಖಿತ ಹೇಳಿಕೆಗಳು ಹಾಗೂ ತನಿಖಾಧಿಕಾರಿಗಳ ವಿಚಾರಣಾ ವರದಿಯಲ್ಲಿನ ಅಂಶಗಳನ್ನು ಪರಿಶೀಲಿಸಿದಾಗ ಈ ಕೆಳಕಂಡ ಅಂಶಗಳು ಕಂಡುಬರುತ್ತವೆ.

- ಶ್ರೀಮತಿ ಪಾರ್ವತಮ್ಮ ಕೋಂ ವೆಂಕಟರವಣಪ್ಪ, ಅಧ್ಯಕ್ಷರು, ಮಿಟ್ಟಹಳ್ಳಿ ಗ್ರಾಮ ಪಂಚಾಯತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ರವರು 2016–2017ನೇ ಸಾಲಿನ ಸ್ವಚ್ಚಭಾರತ್ ಮಿಷನ್ ಯೋಜನೆಯಡಿಯಲ್ಲಿ ಒಂದೇ ಭಾವಚಿತ್ರಕ್ಕೆ ಸಂಬಂಧಪಟ್ಟಂತೆ ಸುಮಾರು ಶೌಚಾಲಯದ ಬಿಲ್ಲುಗಳನ್ನು ಮಾಡಿರುವುದು, ಹಲವಾರು ಫಲಾನುಭವಿಗಳಿಗೆ ಸೇರಬೇಕಾದ ಅನುದಾನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು ಮತ್ತು ಬಿಲ್ ಕಲೆಕ್ಟರ್ ರವರುಗಳು ಸೇರಿ ಅಧ್ಯಕ್ಷರು ಉಪಾಧ್ಯಕ್ಷರು ಮತ್ತು ಬಿಲ್ ಕಲೆಕ್ಟರ್‌ರವರ ಬ್ಯಾಂಕ್ ಖಾತೆಗಳಿಗೆ ಬಿಡುಗಡೆ ಮಾಡಿಕೊಂಡು ಸರ್ಕಾರಿ ಹಣವನ್ನು ಗ್ರಾಮ ಪಂಚಾಯತಿಯಲ್ಲಿ ಅವ್ಯವಹಾರ ಮತ್ತು ಕರ್ತವ್ಯಲೋಪ ಎಸಗಿರುವ ಸಂಬಂಧ ಇರುವ ದೂರಿನ ಬಗ್ಗೆ ಶ್ರೀಮತಿ ಪಾರ್ವತಮ್ಮ ರವರಿಗೆ ದಿನಾಂಕ: 13/05/2019 ರಂದು ಕಾರಣ ಕೇಳಿ ನೋಟೀಸ್ ನೀಡಿ ಲಿಖಿತ ವಿವರಣೆ ನೀಡುವಂತೆ ತಿಳಿಸಲಾಗಿರುತ್ತದೆ. ಈ ಸಂಬಂಧ ದಿನಾಂಕ: 29/05/2019 ರಂದು ಲಿಖಿತ ಹೇಳಿಕೆ ನೀಡಿರುತ್ತಾರೆ. ಈ ವಿಚಾರದ ಬಗ್ಗೆ ದಿನಾಂಕ:11/09/2019 ಹಾಗೂ ದಿನಾಂಕ:23/09/2019 ರಂದು ವಿಚಾರಣೆ ನಡೆಸಲಾಗಿರುತ್ತದೆ. ಸದರಿರವರ ವಿರುದ್ಧ ಇರುವ ದೂರಿನ ಬಗ್ಗೆ ಅವರು ನೀಡಿದ ಲಿಖಿತ ಹೇಳಿಕೆ,

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ನೀಡಿರುವ ವರದಿಯಿಂದ ಅವರ ಮೇಲಿರುವ ದೂರಿಗೆ ಸಂಬಂಧಿಸಿದಂತೆ ಸರ್ಕಾರಿ ಅನುದಾನ ದುರ್ಬಳಕೆ, ಕರ್ತವ್ಯ ಲೋಪ ಮತ್ತು ಮಾರ್ಗಸೂಚಿ ಉಲ್ಲಂಘನೆಯಾಗಿರುವುದು ವಿಚಾರಣಾಧಿಕಾರಿಗಳ ವಿಚಾರಣೆಯಿಂದ ತಿಳಿದು ಬರುತ್ತದೆ.

ಶ್ರೀಮತಿ ಪಾರ್ವತಮ್ಮ ಕೋಂ ವೆಂಕಟರವಣಪ್ಪ, ಅಧ್ಯಕ್ಷರು, ಮಿಟ್ಟಹಳ್ಳಿ ಗ್ರಾಮ ಪಂಚಾಯತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ರವರು 2016-17ನೇ ಸಾಲಿನಲ್ಲಿ ಸ್ವಚ್ಛಭಾರತ್ ಮಿಷನ್ ಯೋಜನೆಯಡಿಯಲ್ಲಿ ಎಸಗಿದ್ದಾರೆ ಎನ್ನಲಾದ ಆಪಾದನೆಗಳ ಕುರಿತಂತೆ ಪ್ರಧಾನ ಕಾರ್ಯದರ್ಶಿ ರವರ ವಿಚಾರಣಾ ನ್ಯಾಯಾಲಯದಲ್ಲಿ ದಿನಾಂಕ:13-01-2021 ಮತ್ತು 28-01-2021ರಂದು ವಿಚಾರಣೆ ಜರುಗಿ, ವಿಚಾರಣೆ ಸಮಯದಲ್ಲಿ ಸದರಿ ಎದುರುದಾರರಿಗೆ ಅಹವಾಲುಗಳನ್ನು ಹೇಳಿಕೊಳ್ಳಲು ಸಾಕಷ್ಟು ಕಾಲಾವಕಾಶ ನೀಡಲಾಗಿರುತ್ತದೆ ಹಾಗೂ ಈಗಾಗಲೇ ಎದುರುದಾರರು ಲಿಖಿತ ಹೇಳಿಕೆ ಸಲ್ಲಿಸಿದ್ದು, ಮುಂದುವರೆದ ತಾವು ಹೇಳುವುದು ಏನು ಇಲ್ಲವೆಂದು ತಿಳಿಸಿರುತ್ತಾರೆ.

ಅಂತಿಮವಾಗಿ, ಶ್ರೀಮತಿ ಪಾರ್ವತಮ್ಮ ಕೋಂ ವೆಂಕಟರವಣಪ್ಪ, ಅಧ್ಯಕ್ಷರು, ಮಿಟ್ಟಹಳ್ಳಿ ಗ್ರಾಮ ಪಂಚಾಯತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ರವರು 2016-17 ನೇ ಸಾಲಿನ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿಯಲ್ಲಿ ಒಂದೇ ಭಾವಚಿತ್ರಕ್ಕೆ ಸಂಬಂಧಪಟ್ಟಂತೆ ಸುಮಾರು ಶೌಚಾಲಯದ ಹಲವಾರು ಫಲಾನುಭವಿಗಳಿಗೆ ಸೇರಬೇಕಾದ ಅನುದಾನವನ್ನು ಬ್ಯಾಂಕ್ ಖಾತೆಗಳಿಗೆ ಬಿಡುಗಡೆ ಮಾಡಿಕೊಂಡು ಸರ್ಕಾರಿ ಹಣವನ್ನು ದುರುಪಯೋಗಪಡಿಸಿಕೊಂಡಿರುವುದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ ಹಾಗೂ ಪ್ರಾದೇಶಿಕ ಆಯುಕ್ತರು, ಬೆಂಗಳೂರು ಇವರ ವಿಚಾರಣಾ ವರದಿಯಿಂದ ಸಾಬೀತಾಗಿರುವುದರಿಂದ ಇವರನ್ನು **ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1003 ಗ್ರಾಪಂಅ 2019, ದಿನಾಂಕ:06.01.2020ರಲ್ಲಿ** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4) & 48(5) ರನ್ವಯ ಮಿಟ್ಟಹಳ್ಳಿ ಗ್ರಾಮ ಪಂಚಾಯಿತಿಯ ಸದಸ್ಯತ್ವ ಸ್ಥಾನ ಹಾಗೂ ಅಧ್ಯಕ್ಷ ಸ್ಥಾನದಿಂದ ತೆಗೆದು ಹಾಕಿರುವ ಸದರಿ ಆದೇಶವನ್ನು ಸ್ಥಿರೀಕರಿಸಲು ನಿರ್ಣಹಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1003/ಗ್ರಾಪಂಅ/2019 ಬೆಂಗಳೂರು, ದಿನಾಂಕ:07-06-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಆಪಾದಿತ ಹಿಂದಿನ ಅಧ್ಯಕ್ಷರಾದ ಶ್ರೀಮತಿ ಪಾರ್ವತಮ್ಮ ಕೋಂ ವೆಂಕಟರವಣಪ್ಪ ರವರು ಮಿಟ್ಟಹಳ್ಳಿ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ರವರು 2016-17 ನೇ ಸಾಲಿನ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿಯಲ್ಲಿ ಒಂದೇ ಭಾವಚಿತ್ರಕ್ಕೆ ಸಂಬಂಧಪಟ್ಟಂತೆ ಸುಮಾರು ಶೌಚಾಲಯದ ಹಲವಾರು ಫಲಾನುಭವಿಗಳಿಗೆ ಸೇರಬೇಕಾದ ಅನುದಾನವನ್ನು ಬ್ಯಾಂಕ್ ಖಾತೆಗಳಿಗೆ ಬಿಡುಗಡೆ ಮಾಡಿಕೊಂಡು ಸರ್ಕಾರಿ ಹಣವನ್ನು ದುರುಪಯೋಗಪಡಿಸಿಕೊಂಡಿರುವುದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ ಹಾಗೂ ಪ್ರಾದೇಶಿಕ ಆಯುಕ್ತರು, ಬೆಂಗಳೂರು ರವರ ವಿಚಾರಣಾ ವರದಿಯಿಂದ ಸಾಬೀತಾಗಿರುವುದರಿಂದ **ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4)ರನ್ವಯ** ಶ್ರೀಮತಿ ಪಾರ್ವತಮ್ಮ ಕೋಂ ವೆಂಕಟರವಣಪ್ಪ **ರವರನ್ನು ಮಿಟ್ಟಹಳ್ಳಿ ಪಂಚಾಯಿತಿ ಸದಸ್ಯ ಸ್ಥಾನ ಮತ್ತು ಅಧ್ಯಕ್ಷ ಸ್ಥಾನದಿಂದ ತೆಗೆದು ಹಾಕಿರುವ ದಿನಾಂಕ:06.01.2020ರ ಆದೇಶವನ್ನು ಸ್ಥಿರೀಕರಿಸಿ ಆದೇಶಿಸಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 07/06/21
**(ನವೀನ್ ಕುಮಾರ್.ಬಿ)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.

2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ.
3. ಕಾರ್ಯನಿರ್ವಾಹಕ ಅಧಿಕಾರಿ, ಚಿಂತಾಮಣಿ ತಾಲ್ಲೂಕು ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮಿಟ್ಟಹಳ್ಳಿ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
5. ಶ್ರೀಮತಿ ಪಾರ್ವತಮ್ಮ ಕೋಂ ವೆಂಕಟರವಣಪ್ಪ, ಮಿಟ್ಟಹಳ್ಳಿ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ
6. ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್–1) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.

*******